# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521

**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ಅಂತರ್ಜಾಲ : https://kptcl.karnataka.gov.in

ದೂರವಾಣಿ ಸಂಖ್ಯೆ : 080-22212343

ಇ-ಮೇಲ್ ವಿಳಾಸ : director.ahr.kptcl@gmail.com


**ವಿಷಯ:** ದಿನಾಂಕ: 01.01.2023 ರಿಂದ ಅನ್ವಯಿಸುವಂತೆ ನಿಗಮದ ಎಲ್ಲಾ ನೌಕರರಿಗೆ/ನಿವೃತ್ತಿ ವೇತನದಾರರಿಗೆ/ಕುಟುಂಬ ಪಿಂಚಣಿದಾರರಿಗೆ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಬಗ್ಗೆ.

***

**ಓದಲಾಗಿದೆ:**

1. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 18.03.2023 ರಂದು ಕವಿಪ್ರನಿ ನೌಕರರ ಸಂಘ(ನೋ.ಸಂ.659) ಮತ್ತು ನಿಗಮದ ಆಡಳಿತ ವರ್ಗದ ನಡುವೆ ಆದ ಒಪ್ಪಂದ.
2. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 01.04.2022 ರಿಂದ ಜಾರಿಗೆ ಬರುವಂತೆ ನಿಗಮದ ನೌಕರರಿಗೆ, ಅಧಿಕಾರಿಗಳಿಗೆ ಮತ್ತು ನಿವೃತ್ತಿ ವೇತನದಾರರಿಗೆ/ಕುಟುಂಬ ನಿವೃತ್ತಿ ವೇತನದಾರಿಗೆ ಸಂಬಂಧಪಟ್ಟಂತೆ ಹೊರಡಿಸಲಾದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/33357/2022-23 ಮತ್ತು ಕವಿಪ್ರನಿನಿ/ಬಿ16/33358/2022-23 ದಿನಾಂಕ: 20.03.2023 ಹಾಗೂ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/33359/2022-23 ದಿನಾಂಕ: 28.03.2023.
3. ದಿನಾಂಕ: 01.01.2023 ರಿಂದ ಜಾರಿಗೆ ಬರುವಂತೆ, ರಾಜ್ಯ ಸರ್ಕಾರಿ ನೌಕರರಿಗೆ ತುಟ್ಟಿಭತ್ಯೆಯ ದರವನ್ನು ಪರಿಷ್ಕರಿಸಿ ಹೊರಡಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಆಇ 9 ಎಸ್‌ಆರ್ ಪಿ 2023 ದಿನಾಂಕ: 30.05.2023.
4. ನಿಗಮದ, ದಿನಾಂಕ: 06.06.2023 ರ ಟಿಪ್ಪಣಿ.

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/33335/2022-23, ಬೆಂಗಳೂರು, ದಿನಾಂಕ:** 8 JUN 2023

1. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ತನ್ನ ಎಲ್ಲಾ ನೌಕರರಿಗೆ 1ನೇ ಜನವರಿ 2023 ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ವೇತನದ ಶೇಕಡ 31 ರಿಂದ ಶೇಕಡ 35 ಕ್ಕೆ ಹೆಚ್ಚಿಸಿ ಮಂಜೂರು ಮಾಡಿದೆ.

2. ಈ ಆದೇಶದ ಉದ್ದೇಶಗಳಿಗಾಗಿ ಮೂಲ ವೇತನ ಎಂದರೆ ನೌಕರರು ಧಾರಣೆ ಮಾಡಿರುವ ಹುದ್ದೆಗಳಿಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುವ ಮೂಲ ವೇತನ ಮತ್ತು ಈ ಕೆಳಗೆ ತಿಳಿಸಿರುವ ಇತರೆ ಸೌಲಭ್ಯಗಳನ್ನು ಸಹ ಒಳಗೊಂಡಿರುತ್ತದೆ:-

   a) ನಿಗಮದ ನಿಯಮಗಳಿಗನುಸಾರವಾಗಿ ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ನೀಡಲಾಗಿರುವ ಎಲಾಂಗೇಷನ್/ಹೆಚ್ಚುವರಿ ವೇತನ ಬಡ್ತಿಗಳು.

   b) ನಿಗಮದ ನಿಯಮಗಳಿಗನುಸಾರವಾಗಿ ನೀಡಲಾಗಿರುವ ವೈಯಕ್ತಿಕ ವೇತನ (Personal Pay)

3. ಕಾಲಿಕ ವೇತನ ಶ್ರೇಣಿಯಲ್ಲಿರುವ ಪೂರ್ಣಾವಧಿ ನೌಕರರಿಗೆ ಈ ಆದೇಶ ಅನ್ವಯಿಸುತ್ತದೆ. ಆದರೆ ದಿನಗೂಲಿ ಕೆಲಸ ಮಾಡುತ್ತಿರುವ ಮತ್ತು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರಿಗೆ ಈ ಆದೇಶ ಅನ್ವಯಿಸುವುದಿಲ್ಲ.

4. ಮೂಲ ವೇತನಕ್ಕೆ ನಿರೂಪಿಸಿರುವುದನ್ನು ಹೊರತುಪಡಿಸಿ, ಇತರೆ ಯಾವುದೇ ಉಪಲಬ್ಧಗಳು ಸೇರತಕ್ಕದ್ದಲ್ಲ. ತುಟ್ಟಿಭತ್ಯೆಯ ಗಣನೆಗೆ ವಿಶೇಷ ವೇತನ, ಪ್ರಭಾರ ಭತ್ಯೆ ಮತ್ತು ಇತರೆ ಭತ್ಯೆಗಳನ್ನು ವೇತನವೆಂದು ಪರಿಗಣಿಸಲಾಗುವುದಿಲ್ಲ

5. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ತನ್ನ ಎಲ್ಲಾ ನಿವೃತ್ತಿ ವೇತನದಾರರು/ಕುಟುಂಬ ಪಿಂಚಣಿದಾರರಿಗೆ 1ನೇ ಜನವರಿ 2023 ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ವೇತನದ ಶೇಕಡ 31 ರಿಂದ ಶೇಕಡ 35 ಕ್ಕೆ ಹೆಚ್ಚಿಸಿ ಮಂಜೂರು ಮಾಡಿದೆ.

6. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿಭತ್ಯೆಯನ್ನು ನಗದಾಗಿ ಪಾವತಿ ಮಾಡುವುದು.

7. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಲು 50 ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಾಂಕಗೊಳಿಸತಕ್ಕದ್ದು ಮತ್ತು 50 ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

8. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ಕಾಣಿಸುವುದನ್ನು ಮುಂದುವರೆಸಲಾಗುವುದು ಹಾಗೂ ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನವೆಂದು ಪರಿಗಣಿಸಲಾಗುವುದಿಲ್ಲ.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/ನಿರ್ದೇಶಕರು(ಹಣಕಾಸು)/ ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.
   https://kptcl.karnataka.gov.in for information of:
6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಆರ್.ಹೆಚ್.ಲಕ್ಕ್ಮೀಪತಿ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಕೆ.ಶಿವಣ್ಣ, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ (ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೊಮಾ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ /ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.